ಆ) ಜಿಲ್ಲಾ ಕೇಂದ್ರವಾಗಿರುವ ಈ ನಗರದಲ್ಲಿ ಆರಕ್ಷಕ ಠಾಣೆ ಹಾಗೂ ಸಂಚಾರಿ ಪೊಲೀಸ್ ಠಾಣೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು ?

ಈ) ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ವಿಜಾಪುರ ನಗರದಲ್ಲಿ 5 ನಾಗರೀಕ ಪೊಲೀಸ್ ಠಾಣೆಗಳು ಮತ್ತು 1 ಸಂಚಾರಿ ಪೊಲೀಸ್ ಠಾಣೆ ಇರುತ್ತವೆ.

ವಿವರ :

1. ಗಾಂಧಿಚೌಕ ಪೊಲೀಸ್ ಠಾಣೆ
2. ಗೊಲಗುಂಬಜ ಪೊಲೀಸ್ ಠಾಣೆ
3. ಎ.ಪಿ.ಎಂ.ಸಿ. ಪೊಲೀಸ್ ಠಾಣೆ
4. ಆದರ್ಶನಗರ ಪೋಲೀಶ್ ಠಾಣೆ
5. ಬಿಜಾಪುರ ಗ್ರಾಮೀಣ ಪೊಲೀಸ್ ಠಾಣೆ

1. ಬಿಜಾಪುರ ಸಂಚಾರಿ ಪೋಲೀಶ್ ಠಾಣೆ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಜಲನಗರದಲ್ಲಿ ಹೊಸದಾಗಿ ಪೊಲೀಸ್ ಠಾಣೆ ಸೃಜಿಸುವ ಕುರಿತಂತೆ, ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

(2) (124) ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬಿಜಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದರೂ, ಮಹಿಳೆಯರಿಗಾಗಿ ಪ್ರತ್ಯೇಕ ಮಹಿಳಾ ಪೊಲೀಸ್ ಠಾಣೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಬಿಜಾಪುರದಲ್ಲಿ ಮಹಿಳಾ ಪೊಲೀಸ್ ಠಾಣೆ ಪ್ರಾರಂಭಿಸುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಇ) ಹಾಗಿದ್ದಲ್ಲಿ, ಯಾವಾಗ ಮತ್ತು ಎಷ್ಟು ಮಹಿಳಾ ಪೊಲೀಸ್ ಠಾಣೆಗಳನ್ನು ಮಂಜೂರು ಮಾಡಲಾಗುವುದು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಇಲ್ಲ.

ಆ) ಸದ್ಯದಲ್ಲಿ ಇಲ್ಲ.

ಇ) ಪ್ರಸ್ತುತ ಉದ್ಭವಿಸುವುದಿಲ್ಲ.

(3) (125) ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬಿಜಾಪುರ ನಗರದಲ್ಲಿರುವ ತಾಬಸಬವಡೆ ಸೇರಿದಂತೆ ಐತಿಹಾಸಿಕ ಸ್ಮಾರಕಗಳನ್ನು ಅತಿಕ್ರಮಣ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಅತಿಕ್ರಮಿಸಿರುವ ಸ್ಮಾರಕಗಳ ಪೂರ್ಣ ವಿವರಗಳನ್ನು ನೀಡುವುದು);

ಆ) ಹಾಗಿದ್ದಲ್ಲಿ, ಅತಿಕ್ರಮಣಕಾರರು ಯಾರು ಯಾರು;

ಇ) ಅತಿಕ್ರಮಣಕಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ಅತಿಕ್ರಮಣಕಾರರ ವಿರುದ್ಧ ನ್ಯಾಯಾಲಯದಲ್ಲಿ ಹೂಡಲಾದ ಪ್ರಕರಣಗಳು ಎಷ್ಟು ;

ಉ) ಎಷ್ಟು ಪ್ರಕರಣಗಳು ಇತ್ಯರ್ಥವಾಗಿವೆ ಹಾಗೂ ಬಾಕಿ ಇರುವ ಪ್ರಕರಣಗಳೆಷ್ಟು;

ಊ) ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ?

ಋ) ಐತಿಹಾಸಿಕ ತಾಬಸಬವಡೆ ಸ್ಮಾರಕವನ್ನು ಪ್ರಾಚ್ಯವಸ್ತು ಮತ್ತು ಪುರಾತತ್ವ ಇಲಾಖೆಗೆ ವಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಎ) ಪುರಾತತ್ವ ಇಲಾಖೆಗೆ ಯಾವಾಗ ಹಸ್ತಾಂತರಿಸಲಾಗುವುದು ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಬಂದಿದೆ. ಅತಿಕ್ರಮಿಸಿರುವ ಸ್ಮಾರಕಗಳ ಪೂರ್ಣ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ವಿವರಗಳನ್ನು ಲಗತ್ತಿಸಲಾಗಿದೆ.

ಇ) ಕಂದಾಯಧಿಕಾರಿಗಳ ಸಹಕಾರ ಪಡೆದು ಭಾರತೀಯ ಪುರಾತತ್ವ ಸರ್ವೇಕ್ಷಣೆಯು ಕೋಟೆಗೋಡೆ ಬಳಿ 15 ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸಲು ಕ್ರಮ ಕೈಗೊಂಡಿರುತ್ತದೆ. ಒತ್ತುವರಿಗಳನ್ನು ತಡೆಯಲು ಕಂದಾಯಾಧಿಕಾರಿಗಳ ನೇತೃತ್ವದಲ್ಲಿನ ಸಮನ್ವಯ ಸಮಿತಿಗಳು ಕಾರ್ಯ ನಿರ್ವಹಿಸುತ್ತಿವೆ.

ಈ) ಭಾರತೀಯ ಪುರಾತತ್ವ ಸರ್ವೇಕ್ಷಣೆಯು ನ್ಯಾಯಾಲಯದಲ್ಲಿ ಹೂಡಲಾದ ದಾವೆಗಳ ಸಂಖ್ಯೆ; 30.